**ಕರ್ನಾಟಕ ಸರ್ಕಾರ**

**ಸಂಖ್ಯೆ:** ಡಿಟಿಇ/12/ಎಸಿಎಂ(2)/2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 16-05-2017.

## -:: ಪ್ರವೇಶಾಧಿಸೂಚನೆ ::-

**ವಿಷಯ:** 2017-18ನೇ ಸಾಲಿನ ಪ್ರಥಮ ಡಿಪ್ಲೋಮಾ **ಲೈಬ್ರರಿ ಸೈನ್ಸ್ ಕೋರ್ಸಿನ** ಪ್ರವೇಶಕ್ಕೆ **ದ್ವಿತೀಯ ಪಿಯುಸಿ** ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳಿಗೆ ಅರ್ಜಿಗಳ ವಿತರಣೆ ಮತ್ತು ಸ್ವೀಕರಿಸುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂ. ಇಡಿ 207 ಟಿಪಿಎಲ್ 2016, ದಿ:20-03-2017.
2. ಈ ಕಛೇರಿ ಸಮ ಸಂಖ್ಯೆ ಅಧಿಸೂಚನೆ ದಿನಾಂಕ:09-05-2017.

-00000000-

2017-18ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖ(2)ರಲ್ಲಿ ಈಗಾಗಲೇ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಅರ್ಜಿ ವಿತರಣೆ ಮತ್ತು ಸ್ವೀಕೃತಿ ಬಗ್ಗೆ ಅಧಿಸೂಚನೆಯನ್ನು ನೀಡಲಾಗಿರುತ್ತದೆ. ಈ ಸಂಬಂಧದಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸುವ ಅಂತಿಮ **ದಿ:25-05-2017** ಎಂದು ನಿಗಧಿಪಡಿಸಿ ಎಲ್ಲಾ ನೋಡಲ್ ಸೆಂಟರ್‌ಗಳ ಮೂಲಕ ಪ್ರಸಕ್ತ ಸಾಲಿನ ಡಿಪ್ಲೋಮಾ ಪ್ರವೇಶ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ.

### OFF-LINE ಮೂಲಕ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ದ್ವಿತೀಯ ಪಿಯುಸಿ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ

| ಸಂಸ್ಥೆಯ ಹೆಸರು | ಕೋರ್ಸುಗಳು | ವಿದ್ಯಾರ್ಹತೆ |
|---|---|---|
| 1. ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಎಸ್.ಜೆ.ಪಿ. ಕ್ಯಾಂಪಸ್, ಬೆಂಗಳೂರು<br>2. ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಮಂಗಳೂರು.<br>3. ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹಾಸನ | **Library Science (Non-Engineering)** | **II PUC/Equivalent** |

**ವಿ.ಸೂ:-**

1. **ದ್ವಿತೀಯ ಪಿಯುಸಿ ವಿದ್ಯಾರ್ಹತೆಗನುಗುಣವಾಗಿ ಪ್ರಥಮ ಡಿಪ್ಲೋಮಾದಲ್ಲಿ ವ್ಯಾಸಂಗ ಮಾಡಲು ಇಚ್ಛಿಸುವ ಅಭ್ಯರ್ಥಿಗಳು ಮೇಲ್ಕಂಡ ಪಾಲಿಟೆಕ್ನಿಕ್‌ಗಳಲ್ಲಿ ಮಾತ್ರ ಅರ್ಜಿಗಳನ್ನು ಕಛೇರಿ ವೇಳೆಯಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿತ ದಿನಾಂಕದೊಳಗೆ ಮೇಲ್ಕಂಡ ಸಂಸ್ಥೆಗಳಲ್ಲಿಯೇ ಸಲ್ಲಿಸುವುದು. OFF-LINE ಮುಖಾಂತರ ಪ್ರವೇಶ ಪ್ರಕ್ರಿಯೆಗಳ ಸೀಟು ಆಯ್ಕೆ ಸಂದರ್ಭದಲ್ಲಿ ಎಲ್ಲಾ ಮೂಲ ದಾಖಲೆ ಮತ್ತು ನಿಗದಿಪಡಿಸಿದ ಪ್ರವೇಶ ಶುಲ್ಕವನ್ನು ನಗದು ರೂಪದಲ್ಲಿ ಪಾವತಿಸುವುದು ಕಡ್ಡಾಯವಾಗಿದೆ. ಮೂಲದಾಖಲೆಗಳ ಪರಿಶೀಲನೆ ನಂತರ ಸೀಟು ಆಯ್ಕೆ ಪ್ರಕ್ರಿಯೆಗಳಲ್ಲಿ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.**
2. **ಲೈಬ್ರರಿ ಸೈನ್ಸ್ ಕೋರ್ಸಿಗೆ** ಕರ್ನಾಟಕ ಪಿಯುಸಿ/ತತ್ಸಮಾನ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದ್ದು, ಈ ಕೋರ್ಸುಗಳಿಗೆ ಸಂಬಂಧಸಿದಂತೆ ಅರ್ಜಿಗಳನ್ನು ಮೇಲ್ಕಂಡ ಸಂಸ್ಥೆಗಳಲ್ಲಿಯೇ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು.
3. **ಲೈಬ್ರರಿ ಸೈನ್ಸ್ ಕೋರ್ಸಿಗೆ** ಸಂಬಂಧಸಿದಂತೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿ ನಿಗದಿಪಡಿಸಿದ ವೇಳಾಪಟ್ಟಿಯನುಸಾರವಾಗಿ ಅರ್ಜಿ ನೋಂದಣಿ ಶುಲ್ಕವನ್ನು (G.M/IIA/IIB/IIIA/IIIB = ₹ 100/- & SC/ST/CAT-1 = ₹ 50/-) ಕರ್ನಾಟಕ ರಾಜ್ಯದ ಯಾವುದೇ **STATE BANK OF INDIA** ಶಾಖೆಗಳಲ್ಲಿ ಈ ಕೆಳಕಂಡ ಕೋಷ್ಟಕದಲ್ಲಿನ ಖಾತೆಗೆ ಪಾವತಿಸಿ BANK CHALLAN (counterfoil) ನ್ನು ಪಡೆದು ನಂತರ ಭರ್ತಿ ಮಾಡಿದ ಅರ್ಜಿಗಳನ್ನು ಕಡ್ಡಾಯವಾಗಿ ಪ್ರವೇಶ ಬಯಸುವ ಸಂಸ್ಥೆಗಳಲ್ಲಿಯೇ ಸಲ್ಲಿಸಿ ಸ್ವೀಕೃತಿ ಪಡೆದು ಹಾಗೂ ಸೀಟು ಪ್ರಕ್ರಿಯೆಯ ವೇಳಾಪಟ್ಟಿಯನ್ನು ಸಂಬಂಧಸಿದ ಸಂಸ್ಥೆಗಳ ಪ್ರಾಚಾರ್ಯರಿಂದ ಪಡೆದುಕೊಳ್ಳುವುದು ಅಭ್ಯರ್ಥಿಯ ಜವಾಬ್ದಾರಿಯಾಗಿರುತ್ತದೆ.

| ಬ್ಯಾಂಕ್ | ಖಾತೆಯ ಹೆಸರು | ಖಾತೆ ಸಂ. | IFSC Code |
|---|---|---|---|
| ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಮಲ್ಲೇಶ್ವರಂ ಶಾಖೆ, ಬೆಂಗಳೂರು | 'ED-KEA-DCET-2017 Application Fee Collection Account | 36843662415 | SBIN0007080 |

2017–18ನೇ ಸಾಲಿನಲ್ಲಿ ಪ್ರವೇಶ ಪಡೆಯುವ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಪ್ರವೇಶಾಧಿಸೂಚನೆ ನೀಡಲಾಗಿದ್ದು, ಅಭ್ಯರ್ಥಿಗಳಿಗೆ ಸೀಟು ಹಂಚಿಕೆ ಆಯ್ಕೆ ಸಂಬಂಧದಲ್ಲಿ ಕೆಳಕಂಡ ಶೈಕ್ಷಣಿಕ ಕಾರ್ಯಕ್ರಮವನ್ನು ನಿಗಧಿಪಡಿಸಲಾಗಿದೆ.

| ಕ್ರ ಸಂ. | ಪ್ರವೇಶಕ್ಕೆ ಸಂಬಂಧಿಸಿದ ವಿವರ | | ಪ್ರವೇಶಕ್ಕೆ ಸಂಬಂಧಿಸಿದ ದಿನಾಂಕ |
|---|---|---|---|
| 1. | ಪ್ರವೇಶಕ್ಕೆ ಸಂಬಂಧಿಸಿದ ಅರ್ಜಿಗಳ ವಿತರಣೆ | – | 10–05–2017 ರಿಂದ 25–05–2017 |
| 2. | ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸುವ ಅಂತಿಮ ದಿನಾಂಕ | – | 25–05–2017 |
| 3. | ಅರ್ಹ ಅಭ್ಯರ್ಥಿಗಳ ದಾಖಲೆಗಳ ಪರಿಶೀಲನೆ ಹಾಗೂ ಸೀಟು ಹಂಚಿಕೆ | – | 29–05–2017 ರಿಂದ 30–05–2017 |
| 4. | ಅಂತಿಮವಾಗಿ ಖಾಲಿ ಉಳಿದ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳ ದಾಖಲೆಗಳ ಪರಿಶೀಲನೆ ಹಾಗೂ ಸೀಟು ಹಂಚಿಕೆ | – | 31–05–2017 |

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ **ದಿ:31–05–2017** ರೊಳಗೆ ಪ್ರವೇಶ ಪ್ರಕ್ರಿಯೆಯನ್ನು **(OFF-LINE)** ಮುಖಾಂತರ ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಪೂರ್ಣಗೊಳಿಸಲು ತಿಳಿಸಲಾಗಿದೆ.

ನಿರ್ದೇಶಕರು

**ಇವರಿಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಮಂಗಳೂರು
3. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹಾಸನ

} ಮೇಲ್ಕಂಡ ಪ್ರವೇಶ ವೇಳಾ ಪಟ್ಟಿಯು ಮಾತ್ರ ಅನ್ವಯವಾಗುವಂತೆ ಕ್ರಮತೆಗೆದುಕೊಳ್ಳುವುದು

**ಪ್ರತಿ ಮಾಹಿತಿಗಾಗಿ:–**

1) ಜಂಟಿ ನಿರ್ದೇಶಕರು(ಆಡಳಿತ), ತಾಂ.ಶಿ.ನಿ, ಬೆಂಗಳೂರು.
2) ಕಾರ್ಯದರ್ಶಿಗಳು(ಪರೀಕ್ಷೆ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
3) ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ,
4) ನಿರ್ದೇಶಕರ ಆಪ್ತಶಾಖೆಗೆ,
5) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂ.ಶಿ.ನಿ, ಬೆಂಗಳೂರು,
6) ಎಸ್‌ಟಿಎಲ್, ಡಿವಿಪಿ(1) ಮತ್ತು ಡಿವಿಪಿ(2).
7) ಇಆರ್‌ಎಸ್ ವಿಭಾಗಕ್ಕೆ – ಮೇಲ್ಕಂಡ ಅವಧಿಯಲ್ಲಿ ಕರ್ನಾಟಕೇತರ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ ನೀಡುವ ಬಗ್ಗೆ ನಿಯಮಗಳ ಪ್ರಕಾರ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.
8) ಸಂಯೋಜನಾಧಿಕಾರಿಗಳು, ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಪ್ರವೇಶಾಧಿಸೂಚನೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.